ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ. ಎಂ. ಎಫ್. ಸಿ.ರವರ ನ್ಯಾಯಾಲಯ,
ಮಡಿಕೇರಿ.

**ಸಿ.ಸಿ.ನಂಃ.1550/25**

ಪಿಡಬ್ಲ್ಯುಃ – 4

ಸಿಡಬ್ಲ್ಯುಃ – 7

ದಿನಾಂಕಃ 28.07.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು | – ಚಂದ್ರಶೇಖರ್ |
| ತಂದೆಯ ಹೆಸರು | – ಬಸಪ್ಪ |
| ವಯಸ್ಸು | – 56 ವರ್ಷ |
| ವೃತ್ತಿ | – ಎ ಎಸ್ ಐ, ಆಂತರಿಕ ಭದ್ರತಾ ವಿಭಾಗ, ಮಂಗಳೂರು |
| ವಾಸಸ್ಥಳ | – ಮಂಗಳೂರು |

ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ–

ನಾನು ದಿಃ 02.11.2024 ರಿಂದ ದಿಃ 01.05.2025 ರವರೆಗೆ ಮಡಿಕೇರಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ11.03.2025 ರಂದು ಸಂಜೆ 4.30 ಗಂಟೆ ಸಮಯದಲ್ಲಿ ನಾನು ಠಾಣಾ ಉಸ್ತುವಾರಿಯಲ್ಲಿರುವಾಗ ಚಾಸಾ–1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಸ್ವೀಕರಿಸಿ ಅದರ ಆಧಾರದ ಮೇಲೆ ಠಾಣಾ ಮೊಕದ್ದಮೆ ಸಂಖ್ಯೆ 45/2025 ರಂತೆ ಪ್ರಕರಣವನ್ನು ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮತ್ತು ದೂರನ್ನು ಮೇಲಾಧಿಕಾರಿಗಳಿಗೆ ಮತ್ತು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ನಾನು ಚಾಸಾ–6 ರವರಿಗೆ ಕೃತ್ಯ ಸ್ಥಳಕ್ಕೆ ಭೇಟಿ ನೀಡಿ ಮಹಜರು ಮಾಡುವಂತೆ ನಿರ್ದೇಶಿಸಿರುತ್ತೇನೆ. ಚಾಸಾ–6 ರವರು ಮಹಜರು ಮಾಡಿ ತಂದು ಹಾಜರು ಪಡಿಸಿದ್ದನ್ನು ನಾನು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಚಾಸಾ–2 ರವರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ. ದಿಃ11.04.2025 ರಂದು

ಚಾಸಾ–5 ರವರಿಂದ 63(4)(ಸಿ) ದೃಢೀಕರಣ ಪತ್ರ ಪಡೆದುಕೊಂಡಿರುತ್ತೇನೆ. ದಿಃ 27.04.2025 ರಂದು ಆರೋಪಿತರ ವಿರುದ್ದ ತನಿಖೆ ಪೂರ್ಣಗೊಳಿಸಿ ಧೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿಕೊಂಡಿರುತ್ತೇನೆ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿದ್ದು, ಅದು ದೂರಾಗಿದ್ದು, ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದಾರೆ. ಅದನ್ನು ಈಗಾಗಾಲೇ ನಿಪಿ–1 ಎಂದು ಗುರುತಿಸಲಾಗಿದೆ. ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ, ಸಾಕ್ಷಿಯ ಸಹಿಯನ್ನು ನಿಪಿ–1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲೆಯನ್ನು ತೋರಿಸಲಾಗಿದ್ದು, ಅದು ಪ್ರ. ವ. ವರದಿಯಾಗಿದ್ದು, ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದಾರೆ. ಅದನ್ನು ನಿಪಿ–5 ಎಂದು ಗುರುತಿಸಲಾಯಿತು. ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ, ಸಾಕ್ಷಿಯ ಸಹಿಯನ್ನು ನಿಪಿ–5(ಎ ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲೆಯನ್ನು ತೋರಿಸಲಾಗಿದ್ದು, ಅದು 63(4)(ಸಿ) ದೃಢೀಕರಣ ಪತ್ರ ಆಗಿದ್ದು, ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದಾರೆ. ಅದನ್ನು ನಿಪಿ–6 ಎಂದು ಗುರುತಿಸಲಾಯಿತು. ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ, ಸಾಕ್ಷಿಯ ಸಹಿಯನ್ನು ನಿಪಿ–6(ಎ ) ಎಂದು ಗುರುತಿಸಲಾಯಿತು.

ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ ಎಂದು, ಸಾಕ್ಷಿ ನ್ಯಾಯಾಲಯದ ಮುಂದಿರುವ ಆರೋಪಿತರನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಆರೋಪಿ ಸಂಖ್ಯೆ –1, 9 ಮತ್ತು 15 ರವರು ಈ ದಿನ ನ್ಯಾಯಾಲಯಕ್ಕೆ ಗೈರು ಹಾಜರಾಗಿದ್ದು, ಆರೋಪಿತರ ಪರ ವಕೀಲರು ಮಾಫಿ ಅರ್ಜಿಯನ್ನು ಸಲ್ಲಿಸಿದ್ದು, ಆರೋಪಿ ಸಂಖ್ಯೆ –1, 9 ಮತ್ತು 15 ರವರನ್ನು ಗುರುತಿಸಲು ತಕರಾರು ಇಲ್ಲ ಎಂದು ನುಡಿದಿರುತ್ತಾರೆ.

ಪಾಟೀ ಸವಾಲುಃ – ಆರೋಪಿತ ಪರ ವಕೀಲರಾದ ಶ್ರೀ. ಕೆ ಕೆ ಆರ್ ರವರಿಂದಃ–

ದೂರಿನಲ್ಲಿ ನಮೂದು ಮಾಡಿರುವ ಕುಂಬಳದಾಳು ಗ್ರಾಮದ ಸರ್ವೆ ನಂಬರ್ 49/3 ಜಾಗವು ಯಾರ ಹೆಸರಿನಲ್ಲಿ ಇದೆ ಎಂದು ನೀವೇನಾದರು ತನಿಖೆ ಮಾಡಿ ದಾಖಲೆ ಪಡೆದುಕೊಂಡಿದ್ದೀರಾ ಎಂದರೆ ಸಾಕ್ಷಿಯು ಜಮಾಬಂಧಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ಜಮಾಬಂಧಿ ಪ್ರಕಾರ ಸರ್ವೆ ನಂಬರ್ 49/3 ಜಾಗವು ಸರ್ಕಾರದ ಹೆಸರಿನಲ್ಲಿ ಇದೆ. ಸರ್ವೆ

ನಂಬರ್ 49/3 ರಲ್ಲಿ ಫಿರ್ಯಾದಿಯವರು ಸ್ವಾಧೀನದಲ್ಲಿ ಇರುವ ಬಗ್ಗೆ ನಾನು ಯಾವುದೇ ದಾಖಲೆಗಳನ್ನು ಸಂಗ್ರಹಿಸಿಲ್ಲ ಎಂದರೆ ಸರಿ. ನಾನು ಚಾಸಾ–1 ರವರಿಂದ ದೂರನ್ನು ಸ್ವೀಕರಿಸಿಲ್ಲ, ಚಾಸಾ–6 ರವರಿಗೆ ಸ್ಥಳ ಮಹಜರು ಮಾಡುವಂತೆ ನಿರ್ದೇಶನ ನೀಡಿಲ್ಲ ಎಂದರೆ ಸರಿಯಲ್ಲ. ಚಾಸಾ–1 ರವರಿಗೆ ಸಹಾಯ ಮಾಡಲು ನಿಪಿ–5, 6 ದಾಖಲೆಗಳನ್ನು ಈ ಪ್ರಕರಣಕ್ಕಾಗಿ ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನಾನು ಚಾಸಾ–2 ರವರ ಹೇಳಿಕೆ ದಾಖಲು ಮಾಡಿಲ್ಲ ಎಂದರೆ ಸರಿಯಲ್ಲ. ನಾನು ಸರಿಯಾಗಿ ತನಿಖೆ ಮಾಡದೆ ಆರೋಪಿತರ ವಿರುದ್ಧ ಸುಳ್ಳು ಧೋಷಾರೋಪಣಾ ಪಟ್ಟಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಆರೋಪಿತರ ವಿರುದ್ಧ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ – ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/–

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ. ಎಂ. ಎಫ್. ಸಿ, ಮಡಿಕೇರಿ.